ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ: ಪಪೂಶಿ/ಶೈಶಾ-04/ಇತರೆ-23/2014-15 ದಿನಾಂಕ: .02.2015.

15-04-2015

## ಸುತ್ತೋಲೆ

ವಿಷಯ: ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ನಡೆಸಲು ಅನುಮತಿ ನೀಡುವ ಕುರಿತು.

ಉಲ್ಲೇಖ: ರಾಜ್ಯದ ಅಧ್ಯಕ್ಷರು, ಶ್ರೀ ಸತ್ಯ ಸಾಯಿ ಸೇವಾ ಅರ್ಗನೈಸೇಷನ್ಸ್, ಕರ್ನಾಟಕ ಇವರ ಪತ್ರ ದಿನಾಂಕ:09.01.2015.

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಶ್ರೀ ನಾಗೇಶ್.ಜಿ.ದಾಕಪ್ಪ ರಾಜ್ಯಅಧ್ಯಕ್ಷರು, ಶ್ರೀ ಸತ್ಯ ಸಾಯಿ ಸೇವಾ ಅರ್ಗನೈಸೇಷನ್ಸ್, ಕರ್ನಾಟಕ, ಇವರು ಪ್ರಥಮ ಮತ್ತು ದ್ವಿತೀಯ ಪಿಯುಸಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸರ್ಕಾರಿ/ಅನುದಾನಿತ/ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ಪ್ರಬಂಧ ಸ್ಪರ್ಧೆಯನ್ನು ಬರುವ ಜೂನ್ 2015 ರಿಂದ ಆಗಸ್ಟ್ 2015 ರವರೆಗೆ ಎರಡು ಹಂತದಲ್ಲಿ ನಡೆಸಲಿದ್ದು. ಮೊದಲ ಹಂತವಾಗಿ ತಾಲ್ಲೂಕುವಾರು ನಡೆಸಿ ಪ್ರತಿ ಭಾಷೆಯಿಂದ ಮೊದಲ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ದಿನಾಂಕ 15.08.2015ರಂದು ರಾಜ್ಯ ಮಟ್ಟದ ಸ್ಪರ್ಧೆಯನ್ನು ಬೆಂಗಳೂರಿನ ಬೃಂಧಾವನ ಅಶ್ರಮದಲ್ಲಿ ನಡೆಸಿ ವಿಜೇತರರಿಗೆ ಬಹುಮಾನಗಳನ್ನು 15.10.2015ರಂದು ಪ್ರಶಾಂತಿ ನಿಲಯಂನಲ್ಲಿ ನೀಡಲಾಗುವುದಾಗಿ ಮನವಿಯನ್ನು ಸಲ್ಲಿಸಿರುತ್ತಾರೆ (ಪ್ರತಿಯನ್ನು ಮಾಹಿತಿಗಾಗಿ ಇದರೊಂದಿಗೆ ಸಲ್ಲಿಸಿದೆ).

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮತಿ ನೀಡಿದೆ.

1. ಪದವಿ ಪೂರ್ವ ಕಾಲೇಜುಗಳಲ್ಲಿ ದೈನಂದಿನ ಕೆಲಸ ಕಾರ್ಯಗಳಿಗೆ ಯಾವುದೇ ರೀತಿಯಲ್ಲಿ ತೊಂದರೆ ಆಗಬಾರದು.
2. ಈ ಕಾರ್ಯಕ್ರಮಕ್ಕೆ ವಿದ್ಯಾರ್ಥಿ/ಪೋಷಕರಿಂದಾಗಲಿ ಅಥವಾ ಕಾಲೇಜಿನಿಂದಾಗಲಿ ಯಾವುದೇ ಹಣ ಪಡೆಯುವಂತಿಲ್ಲ.

ಸದರಿಯವರು ಸ್ಪರ್ಧೆಯನ್ನು ನಡೆಸುವ ಕುರಿತು ಕಾಲೇಜುಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಿಕೊಡುಂತೆ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರುಗಳು ಸೂಚಿಸಲು ಮುಂದಿನ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

Sd/-

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ

1. ರಾಜ್ಯದ ಜಿಲ್ಲಾ ಉಪನಿರ್ದೇಶಕರುಗಳಿಗೆ. ಪದವಿ ಪೂರ್ವ ಶಿಕ್ಷಣ ಇಲಾಖೆ- ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಿಗೆ – ಜಿಲ್ಲಾ ಉಪನಿರ್ದೇಶಕರ ಮೂಲಕ ಮುಂದಿನ ಕ್ರಮಕ್ಕಾಗಿ.
3. ಶ್ರೀ ನಾಗೇಶ್.ಜಿ.ಧಾಕಪ್ಪ, ರಾಜ್ಯಾಧ್ಯಕ್ಷರು, ನಂ:ಎ-204, 2ನೇ ಮಹಡಿ, ರಿಹೈಸನ್ಸ್ ಜಾಗ್ರತಿ, ರಾಮಗೊಂಡನಹಳ್ಳಿ, ಏರ್‌ಪೋರ್ಟ್ ವೈಟ್‌ಫೀಲ್ಡ್ ರಸ್ತೆ, ಬೆಂಗಳೂರು-66.
4. ಇ-ಅಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ

33 Suthole -2012-13/sara0